**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | **35 (48)** |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 07.12.2020 |
| ಉತ್ತರಿಸುವ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಸರ್ಕಾರಿ / ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸಲು ಇರುವ ಮಾನದಂಡಗಳೇನು; (ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು) | ➢ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 280ಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿದ್ದಲ್ಲಿ 7ನೇ ಹುದ್ದೆಯಾಗಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಸೃಜನೆಗೆ ಅವಕಾಶವಿದೆ.<br>➢ ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಆದೇಶ ಸಂಖ್ಯೆ: ಇಡಿ 69 ಎಲ್‌ಬಿಪಿ 2011, ದಿನಾಂಕ:01/04/2011ರನ್ವಯ ಸಿಬ್ಬಂದಿ ಸ್ಥರ ವಿನ್ಯಾಸಕ್ಕನುಗುಣವಾಗಿ ಶಿಕ್ಷಕರನ್ನು ಒದಗಿಸಲಾಗುತ್ತಿದೆ. |
| ಆ. | ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು (ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು) | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 952 ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿ 747 ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳಿವೆ. |
| ಇ. | ಸದರಿ ಖಾಲಿ ಇರುವ ಹುದ್ದೆಗಳನ್ನು ದೀರ್ಘ ಕಾಲದಿಂದ ಭರ್ತಿ ಮಾಡದಿರಲು ಕಾರಣಗಳೇನು; | ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ 957 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಹಾಗೂ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್-1 ಒಟ್ಟು 441 ಹುದ್ದೆಗಳು ಖಾಲಿ ಇದ್ದು, ಈ ಪೈಕಿ ನೇರ ನೇಮಕಾತಿಗೆ ಕಾಯ್ದಿರಿಸಿದ 331 ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳಂತೆ ಭರ್ತಿ ಮಾಡಲು ಆಯುಕ್ತಾಲಯದಿಂದ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು. ಈ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಈ | ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವದು? | |

ಸಂಖ್ಯೆ: ಇಪಿ 88 ಎಲ್‌ಬಿಪಿ 2020

S.

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ
ಸಚಿವರು